**<u>ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ., ನ್ಯಾಯಾಲಯ.</u>**

**<u>ಹಿರೇಕೆರೂರು.</u>**

**<u>ಸಿ.ಸಿ.ನಂಬರ್ಃ 223/2016</u>**

ಸಿಡಬ್ಲ್ಯೂಃ 16

ಪಿಡಬ್ಲ್ಯೂಃ 8

| | | |
|---|---|---|
| ಸಾಕ್ಷಿಯ ಹೆಸರು | : | ಹುಲಗಪ್ಪ ವಡ್ಡರ |
| ತಂದೆಯ ಹೆಸರು | : | ಹನುಮಪ್ಪ |
| ವಯಸ್ಸು | : | 65 ವರ್ಷ |
| ಉದ್ಯೋಗ | : | ನಿವೃತ ಪಿ.ಎಸ್.ಐ |
| ವಾಸಸ್ಥಳ | : | ದಾರವಾಡ |

ಇಂದು ದಿನಾಂಕಃ 26.11.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಿಸಲಾಯಿತು.

**<u>ಮುಖ್ಯ ವಿಚಾರಣೆಃ</u>** ಮಾನ್ಯ ಎಪಿಪಿಯವರಿಂದಃ

ನಾನು ದಿನಾಂಕಃ 25.05.2015 ರಿಂದ 25.06.2016 ರವರೆಗೆ ಹಂಸಭಾವಿ ಪೋಲಿಸ್ ಠಾಣೆಯಲ್ಲಿ ಪಿ.ಎಸ್.ಐ ಎಂದು ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 31.01.2016 ರಂದು ನಮ್ಮ ಸಿಬ್ಬಂದಿ ಚಾಸಾ–1 ರವರು ನೀಡಿದ ಹೇಳಿಕೆಯ ದೂರನ್ನು ನನ್ನ ಮುಂದೆ ಹಾಜರಪಡಿಸಿದ್ದು, ಅದನ್ನು ನಾನು ಪಡೆದುಕೊಂಡು ಠಾಣಾ ಅಪರಾದ ಕ್ರಮ ಸಂಖ್ಯೆ 17/2016 ರಂದು ಪ್ರಕರಣವನ್ನು ದಾಖಲಿಸಿಕೊಂಡು ಪ್ರಥಮ ವರ್ತಮಾನ ವರದಿಯನ್ನು ತಯಾರಿಸಿ ಮಾನ್ಯ ನ್ಯಾಯಾಲಯಕ್ಕೆ ಕಳುಹಿಸಿಕೊಟ್ಟಿರುತ್ತೇನೆ. ನಂತರ ಮುಂದಿನ ತನಿಖೆಗಾಗಿ ಚಾಸಾ–17 ರವರಿಗೆ ಕಡತವನ್ನು ಹಸ್ತಾಂತರಿಸಿರುತ್ತೇನೆ. ಸಾಕ್ಷಿಯು ದೂರಿನಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ–5 ಎಂದು ಈಗಾಗಲೇ ಗುರುತಿಸಲಾಗಿದ್ದು, ಸಾಕ್ಷಿಯನ್ನು ನಿಪಿ–5(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನಿಪಿ–13 ಎಂದು ಸಾಕ್ಷಿಯ ಸಹಿಯನ್ನು ನಿಪಿ–13(ಎ) ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲುಃ</u>** ಆರೋಪಿತರ ಪರ ಶ್ರೀ ವಿ ವಿ ಎಂ ವಕೀಲರಿಂದಃ

ದೂರನ್ನು ನಮ್ಮ ಸಿಬ್ಬಂದಿಯವರು ಬರೆದುಕೊಂಡು ಬಂದಿರುತ್ತಾರೆ. ನಿಪಿ–5 ರಲ್ಲಿ ನಮೂದಿಸಿರುವ ಮಾಹಿತಿಯನ್ನು ಚಾಸಾ–1 ರವರು ನನ್ನ ಸಿಬ್ಬಂದಿಗೆ ಹೇಳಿಲ್ಲ ಎಂದರೆ ಸರಿಯಲ್ಲ. ಚಾಸಾ–1 ರವರೊಂದಿಗೆ ನಮ್ಮ ಸಿಬ್ಬಂದಿ ಮಿಲಾಪಿಯಾಗಿ ಸೃಷಿಟ ಮಾಡಿಕೊಂಡು ಬಂದಿದ್ದಂತಹ

ದೂರಿನ ಆದಾರದ ಮೇಲೆ ನಾನು ಪ್ರಥಮ ವರ್ತಮಾನ ವರದಿಯನ್ನು ತಯಾರಿಸಿರುತ್ತೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ನನ್ನ ಸಮಕ್ಷಮ

ಓ ಹೇ ಕೇ ಸರಿ ಇದೆ.

ಪ್ರಧಾನ ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,
ಹಿರೇಕೆರೂರು.